ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ.:ಸಿ7(2)ಪ್ರಾಶಿಅ/ಖಾ.ಶಾಲಾ.ಮ.ದಾ & ಶುಲ್ಕ.03/2021-22 ದಿನಾಂಕ: 29-11-2021

## : : ಸುತ್ತೋಲೆ : :

ವಿಷಯ: ರಾಜ್ಯದ ಎಲ್ಲಾ ಶಾಲೆಗಳಲ್ಲಿನ 2021-22ನೇ ಶೈಕ್ಷಣಿಕ ಸಾಲಿನ ಮಕ್ಕಳ ದಾಖಲಾತಿ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಶಿಕ್ಷಣ ಕಾಯ್ದೆ-1983 ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮ ನಿಗಧಿ ಇತ್ಯಾದಿ) ನಿಯಮಗಳು-1995.
2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಕಾಯ್ದೆ-2009. ನಿಯಮಗಳು-2012.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 31 ಪಿಜಿಸಿ 2019, ದಿನಾಂಕ:24-07-2019.
4. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ4(6)ಶೈ ಮತ್ತು ರಜೆ.ಅ.ನಿಗಧಿ.35/2021-21, ದಿನಾಂಕ:20-04-2021 ಮತ್ತು 31-05-2021.
5. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ2(1)ಶೈ.ವ.ನಿ-01/2021-22, ದಿ.4-6-2021.
6. ಈ ಕಛೇರಿ ಸುತ್ತೋಲೆ ದಿನಾಂಕ:04-06-2021, 31-08-2021, 13-10-2021.
7. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ4(6)ಪ್ರೌಶಿ/ಶಾ.ಕಾ.ಪ್ರ/48/2021-22, ದಿನಾಂಕ:21-10-2021

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಶೈಕ್ಷಣಿಕ ಸಾಲಿನ ಶಾಲಾ ಮಕ್ಕಳ ದಾಖಲಾತಿಯನ್ನು ಜೂನ್-15 ರಿಂದ ಪ್ರಾರಂಭಿಸಿ ಆಗಸ್ಟ್ -31ರವರೆಗೆ, ನಂತರ ಅಕ್ಟೋಬರ್ 30 ರೊಳಗೆ ಮುಕ್ತಾಯಗೊಳಿಸುವಂತೆ ಸೂಚಿಸಿ ಈ ಕಛೇರಿ ಉಲ್ಲೇಖಿತ(6)ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು. ನಂತರ ದಿನಾಂಕ:30-11-2021ರವರೆಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸಲಾಗಿತ್ತು.

ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತುತ ದಾಖಲಾತಿಗೆ ನಿಗಧಿಪಡಿಲಾಗಿರುವ ದಿನಾಂಕವನ್ನು 2021ರ ಡಿಸೆಂಬರ್-31 (31-12-2021)ರವರೆಗೆ ವಿಸ್ತರಿಸಲಾಗಿದೆ. ದಾಖಲಾತಿಗೆ ಸಂಬಂದಿಸದಂತೆ ಉಲ್ಲೇಖ(6)ರಲ್ಲಿ ಸೂಚಿಸಿರುವ ಅಂಶಗಳು ಯಥವಾತ್ತಾಗಿ ಮುಂದುವರೆಯುತ್ತದೆ.

ಮುಂದುವರೆದು ಕೋವಿಡ್-19ರ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ / ಇಲಾಖೆ ಹೊರಡಿಸುವ ಮಾರ್ಗಸೂಚಿಗಳಂತೆ ಆಗಬಹುದಾದ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಅಭಿವೃದ್ಧಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ ಮತ್ತು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಪ್ರಚಾರ ನೀಡುವುದರ ಮುಖಾಂತರ ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳ ಮುಖ್ಯಸ್ಥರ ಗಮನಕ್ಕೆ ತರುವುದು.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯೋಪಾದ್ಯಾಯರು/ಆಡಳಿತ ಮಂಡಳಿಗಳಿಗೆ ಸೂಕ್ತ ಕ್ರಮಕ್ಕಾಗಿ ಆಯಾಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ) ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ.
3. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲ್ಬುರ್ಗಿ ಮತ್ತು ಧಾರವಾಡ.
4. ಕಛೇರಿ ಪ್ರತಿ.